ಕರ್ನಾಟಕ ಸರ್ಕಾರ

(ಕಂದಾಯ ಇಲಾಖೆ)

# ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾದಂಡಾಧಿಕಾರಿಗಳ ಕಾರ್ಯಾಲಯ, ಚಿತ್ರದುರ್ಗ ಜಿಲ್ಲೆ

ವಿಷಯ:- ಗ್ರಾಮ ಪಂಚಾಯತಿ ಸಾರ್ವತ್ರಿಕ ಚುನಾವಣೆ-2020 ಕ್ಕೆ ಸಂಬಂಧಿಸಿದಂತೆ ಮದ್ಯಪಾನ ನಿಷೇಧಿಸಿ ಒಣ ದಿನಗಳೆಂದು (Dry days) ಘೋಷಿಸುವ ಬಗ್ಗೆ.

ಉಲ್ಲೇಖ:- ಕಾರ್ಯದರ್ಶಿಗಳು, ರಾಜ್ಯ ಚುನಾವಣಾ ಆಯೋಗ, ಬೆಂಗಳೂರು ಇವರ ಆದೇಶ ಸಂ. ರಾಚುಆ 134 ಇ.ಜಿ.ಪಿ 2020 ದಿ.01-12-2020.

$$$$$$$

ಪ್ರಸ್ತಾವನೆ :-

ಗ್ರಾಮ ಪಂಚಾಯಿತಿ ಸಾರ್ವತ್ರಿಕ ಚುನಾವಣೆ-2020 ಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ ಪತ್ರದಲ್ಲಿ ಮಾನ್ಯ ನಿರ್ದೇಶಕರು, ರಾಜ್ಯ ಚುನಾವಣಾ ಆಯೋಗ ಬೆಂಗಳೂರು ರವರು ಎರಡು ಹಂತಗಳಲ್ಲಿ ಚುನಾವಣೆಯನ್ನು ನಡೆಸಲು ಚುನಾವಣಾ ವೇಳಾಪಟ್ಟಿಯನ್ನು ನಿಗಧಿಪಡಿಸಿರುತ್ತಾರೆ. ಅದರನ್ವಯ ಚಿತ್ರದುರ್ಗ ಜಿಲ್ಲೆಗೆ ಸಂಬಂಧಿಸಿದಂತೆ ಮೊದಲನೇ ಹಂತದಲ್ಲಿ ಚಿತ್ರದುರ್ಗ, ಹೊಸದುರ್ಗ ಮತ್ತು ಹೊಳಲ್ಕೆರೆ ತಾಲ್ಲೂಕುಗಳಲ್ಲಿ ಮತದಾನವು ದಿನಾಂಕ:22-12-2020 ರಂದು (ಮಂಗಳವಾರ) ಹಾಗೂ ಹಿರಿಯೂರು, ಚಳ್ಳಕೆರೆ ಮತ್ತು ಮೊಳಕಾಲ್ಮೂರು ತಾಲ್ಲೂಕುಗಳಲ್ಲಿ ಮತದಾನವು ದಿನಾಂಕ:27-12-2020 (ಭಾನುವಾರ) ರಂದು ನಡೆಯಲಿರುತ್ತದೆ.

ಸದರಿ ಚುನಾವಣೆಗಳು ಮುಕ್ತ ಶಾಂತಿಯುತ, ನಿಷ್ಪಕ್ಷಪಾತ ಹಾಗೂ ಸುಸೂತ್ರವಾಗಿ ನಡೆಯಬೇಕೆಂಬ ಉದ್ದೇಶದಿಂದ ನೀತಿ ಸಂಹಿತೆ ಜಾರಿಯಲ್ಲಿರುವ ಅವಧಿಯಲ್ಲಿ ನೀತಿ ಸಂಹಿತೆಯು ಜಾರಿಯಲ್ಲಿರುವ ಪ್ರದೇಶಗಳಲ್ಲಿರುವ ಎಲ್ಲಾ ಮದ್ಯದ ಅಂಗಡಿಗಳನ್ನು ಮತ್ತು ಮದ್ಯ ತಯಾರಿಕಾ ಘಟಕಗಳನ್ನು ಅದರ ಮಾಲೀಕರು, ಅಧಿಭೋಗದಾರರು ಮತ್ತು ಸಂದರ್ಭಾನುಸಾರ ವ್ಯವಸ್ಥಾಪಕರು ಮುಚ್ಚತಕ್ಕದ್ದು, ಹಾಗೂ ಮೊಹರು ಮಾಡಿ ಅದರ ಕೀಯನ್ನು ಕಾರ್ಯನಿರ್ವಾಹಕ ಮ್ಯಾಜಿಸ್ಟ್ರೇಟರಿಗೆ ಒಪ್ಪಿಸುವಂತೆ ಉಲ್ಲೇಖಿತ ಪತ್ರದಲ್ಲಿ ರಾಜ್ಯ ಚುನಾವಣಾ ಆಯೋಗದಿಂದ ನಿರ್ದೇಶಿಸಿರುತ್ತಾರೆ.

ಮಾನ್ಯ ಕಾರ್ಯದರ್ಶಿಗಳು, ರಾಜ್ಯ ಚುನಾವಣಾ ಆಯೋಗ, ಬೆಂಗಳೂರು ರವರ ನಿರ್ದೇಶನದನ್ವಯ ಚಿತ್ರದುರ್ಗ ಜಿಲ್ಲೆಯಲ್ಲಿ ಎರಡು ಹಂತಗಳಲ್ಲಿ ನಡೆಯಲಿರುವ ಗ್ರಾಮ ಪಂಚಾಯಿತಿ ಸಾರ್ವತ್ರಿಕ ಚುನಾವಣೆ-2020 ರ ನಿಮಿತ್ತ ಮತದಾನವು ಮುಕ್ತಾಯಗೊಳ್ಳುವ ನಲವತ್ತೆಂಟು ಗಂಟೆಗಳ ಮೊದಲಿನ ಅವಧಿಗೆ ನೀತಿ ಸಂಹಿತೆ ಜಾರಿಯಲ್ಲಿರುವ ಪ್ರದೇಶಗಳಲ್ಲಿ ಮದ್ಯ ಮಾರಾಟವನ್ನು ನಿಷೇಧಿಸಿ ಪಾನ ನಿರೋಧ ದಿನವೆಂದು ಘೋಷಿಸಬೇಕಾಗಿರುವುದರಿಂದ ಉಲ್ಲೇಖದ ಸೂಚನೆಗಳನ್ನು ಪರಿಗಣಿಸಿ ಈ ಕೆಳಕಂಡಂತೆ ಆದೇಶಿಸಿದೆ.

## ಆದೇಶ

**ನಂ.ಎಂಎಜಿ(3) ಸಿಆರ್-99. /2020-21** **ದಿನಾಂಕ.05-12-2020**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, **ಕವಿತಾ ಎಸ್.ಮನ್ನಿಕೇರಿ, ಭಾ.ಆ.ಸೇ., ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ** ಆದ ನಾನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ಅಧಿನಿಯಮ, 2020 ರ ಪ್ರಕರಣ 308ಎಸಿ-(ಸಿ) ಅಡಿಯಲ್ಲಿ ದತ್ತವಾದ ಅಧಿಕಾರವನ್ನು ಚಲಾಯಿಸುತ್ತಾ, ಈ ಕೆಳಕಂಡ ಅಂಕಣ(3) ರಲ್ಲಿನ ತಾಲ್ಲೂಕುಗಳಲ್ಲಿನ ಚುನಾವಣೆ ನಡೆಯುವ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಬಗೆಯ ಮದ್ಯದ ಅಂಗಡಿಗಳನ್ನು ಮುಚ್ಚಲು ಹಾಗೂ ಮದ್ಯ ಸಾಗಾಣಿಕೆ, ಶೇಖರಣೆ ಮತ್ತು ಮಾರಾಟ ಮಾಡುವುದನ್ನು ಅಂಕಣ (4) ರಲ್ಲಿ ನಿಗಧಿಪಡಿಸಿರುವ ಅವಧಿಗೆ ಅನ್ವಯಿಸುವಂತೆ ನಿಷೇಧಿಸಿ ಆದೇಶಿಸಿರುತ್ತೇನೆ.

| ಕ್ರಮ ಸಂಖ್ಯೆ | ಹಂತ | ತಾಲ್ಲೂಕಿನ ಹೆಸರು | ಅವಧಿ |
|---|---|---|---|
| 1 | 2 | 3 | 4 |
| 1 | ಮೊದಲನೇ ಹಂತ | ಚಿತ್ರದುರ್ಗ, ಹೊಸದುರ್ಗ, ಹೊಳಲ್ಕೆರೆ | **ದಿನಾಂಕ:20-12-2020 ರ ಸಂಜೆ 5-00 ಗಂಟೆಯಿಂದ ದಿನಾಂಕ:22-12-2020 ರ ಸಂಜೆ 5-00 ಗಂಟೆಯವರೆಗೆ** |
| 2 | ಎರಡನೇ ಹಂತ | ಹಿರಿಯೂರು, ಚಳ್ಳಕೆರೆ ಮೊಳಕಾಲ್ಮೂರು | **ದಿನಾಂಕ:25-12-2020 ರ ಸಂಜೆ 5-00 ಗಂಟೆಯಿಂದ ದಿನಾಂಕ:27-12-2020 ರ ಸಂಜೆ 5-00 ಗಂಟೆಯವರೆಗೆ** |

ನೀತಿ ಸಂಹಿತೆ ಜಾರಿಯಲ್ಲಿರುವ ಪ್ರದೇಶಗಳಲ್ಲಿರುವ ಎಲ್ಲಾ ಮದ್ಯದ ಅಂಗಡಿಗಳನ್ನು ಮತ್ತು ಮದ್ಯ ತಯಾರಿಕಾ ಘಟಕಗಳನ್ನು ಅದರ ಮಾಲೀಕರು, ಅಧಿಭೋಗದಾರರು ಮತ್ತು ಸಂದರ್ಭಾನುಸಾರ ವ್ಯವಸ್ಥಾಪಕರು ಮುಚ್ಚತಕ್ಕದ್ದು, ಹಾಗೂ ಮೊಹರು ಮಾಡಿ ಅದರ ಕೀಯನ್ನು ಕಾರ್ಯನಿರ್ವಾಹಕ ಮ್ಯಾಜಿಸ್ಟ್ರೇಟರಿಗೆ ಒಪ್ಪಿಸತಕ್ಕದ್ದು.

(ಕವಿತಾ ಎಸ್.ಮನ್ನಿಕೇರಿ)
ಜಿಲ್ಲಾಧಿಕಾರಿಗಳು,
ಚಿತ್ರದುರ್ಗ ಜಿಲ್ಲೆ

--2